**ದಿನಾಂಕ: 27.06.2019 ರಂದು ಬೆಳಗ್ಗೆ 11.00 ಗಂಟೆಗೆ ವಿಧಾನ ಸೌಧ, 3ನೇ ಮಹಡಿ, ಕೊಠಡಿ ಸಂಖ್ಯೆ: 334 ರಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀ. ಟಿ.ಎಂ. ವಿಜಯ ಭಾಸ್ಕರ್ ರವರ ಅಧ್ಯಕ್ಷತೆಯಲ್ಲಿ ನಡೆದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ 17ನೇ ರಾಜ್ಯ ಮಟ್ಟದ ಪ್ರಗತಿ ಪರಿಶೀಲನ ಸಭೆಯ ನಡವಳಿ.**

**ಸಭೆಯ ಹಾಜರಾತಿ ಪಟ್ಟಿ ಲಗತ್ತಿಸಿದೆ.**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀ. ಎ.ಬಿ.ಇಬ್ರಾಹಿಂ, ಇವರು ಮುಖ್ಯ ಕಾರ್ಯದರ್ಶಿಗಳಾದ ಶ್ರೀ. ಟಿ.ಎಂ. ವಿಜಯ ಭಾಸ್ಕರ್, ಇವರನ್ನು ಮತ್ತು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿ ವೃಂದದ ಮತ್ತು ಅಧಿಕಾರೇತರ ಸದಸ್ಯರಿಗೆ ಸ್ವಾಗತವನ್ನು ಕೋರಿದರು. ನಂತರ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ದಿನಾಂಕ: 21.02.2019ರ ಸಭೆಯ ನಡವಳಿಯನ್ನು ಅಂಗೀಕರಿಸಿ, ಕೈಗೊಂಡ ನಿರ್ಣಯಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳನ್ನು ಮುಖ್ಯ ಕಾರ್ಯದರ್ಶಿ ರವರು ಪರಿಶೀಲಿಸಿದರು.

1. ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಸ್ಥಳಗಳಲ್ಲಿ, ಸ್ವಂತ ನಿವೇಶನ ಲಭ್ಯವಿರುವ ಒಟ್ಟು 294 ಅಂಗನವಾಡಿಗಳಿಗೆ ಕೂಡಲೇ ಕಟ್ಟಡಗಳನ್ನು ನಿರ್ಮಾಣ ಮಾಡಲು ಮತ್ತು ನಿವೇಶನ ಲಭ್ಯವಿಲ್ಲದಿರುವ ಅಂಗನವಾಡಿ ಕೇಂದ್ರಗಳ ಮಾಹಿತಿಯನ್ನು ಜಿಲ್ಲಾವಾರು ತಯಾರಿಸಿ ಅಂಗನವಾಡಿಗಳನ್ನು ಸ್ಥಾಪಿಸುವಂತೆ ಮತ್ತು ಸರ್ಕಾರಿ ಶಾಲೆಗಳ ಸಮೀಪದಲ್ಲಿಯೇ ಸ್ವಂತ ಕಟ್ಟಡವಿಲ್ಲದಿರುವ ಅಂಗನವಾಡಿ ಕೇಂದ್ರಗಳಿಗೆ ಬಳಕೆಯಾಗದಿರುವ ಶಾಲಾ ಕೊಠಡಿ ಲಭ್ಯವಿದ್ದಲ್ಲಿ, ಅಂತಹ ಕೊಠಡಿಯಲ್ಲಿ ಹಾಗೂ ಒಂದು ವೇಳೆ ಕೊಠಡಿ ಲಭ್ಯವಿಲ್ಲದಿದ್ದಲ್ಲಿ ಶಾಲೆಗಳ ಆವರಣದಲ್ಲಿಯೇ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವಂತೆ ಮುಖ್ಯ ಕಾರ್ಯದರ್ಶಿ ರವರು ತಿಳಿಸಿ, ಈ ಕುರಿತು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿತ ಕೇಂದ್ರ (KSRSAC - Karnataka State Remote Sensing Applications Centre) ಸಂಸ್ಥೆಯವರಿಂದ ಮಾಹಿತಿಯನ್ನು ಪಡೆದು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಯನ್ನು ನೀಡಿ ಕ್ರಮ ವಹಿಸುವಂತೆ ತಿಳಿಸಲಾಯಿತು.
   **(ಕ್ರಮ: ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ)**

2. ಉರ್ದು ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವ ಬಗ್ಗೆ ಪ್ರಸ್ತಾಪಿಸಿದ ಮುಖ್ಯ ಕಾರ್ಯದರ್ಶಿ ರವರು ಟಿ.ಇ.ಟಿ ಪರೀಕ್ಷೆಯಲ್ಲಿ ಸಾಕಷ್ಟು ಅಭ್ಯರ್ಥಿಗಳು ಉತ್ತೀರ್ಣರಾಗದಿರುವುದನ್ನು ಗಮನಿಸಿ ಅಭ್ಯರ್ಥಿಗಳಿಗೆ ವಿಶೇಷ ತರಬೇತಿ ನೀಡುವಂತೆ ಸೂಚಿಸಿದರು. ಮುಂದುವರೆದು ಸೇನೆಯ ನೇಮಕಾತಿ, ನ್ಯಾಯಾಂಗ ಸೇವೆಗಳ ನೇಮಕಾತಿ, ಬ್ಯಾಂಕಿಂಗ್ ಸೇವೆಗಳು ಮತ್ತು ಸ್ಟಾಫ್ ಸೆಲೆಕ್ಷನ್ ಕಮಿಷನ್ (SSC) ಇವುಗಳಲ್ಲೂ ಸಹ ನೇಮಕಾತಿಗೆ ವಿಶೇಷ ತರಬೇತಿ ನೀಡುವಂತೆ ತಿಳಿಸಿದರು.
   **(ಕ್ರಮ: ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಮತ್ತು ನಿರ್ದೇಶಕರು ಉರ್ದು ಮತ್ತು ಮತ್ತೀಯ ಅಲ್ಪಸಂಖ್ಯಾತರ ಭಾಷಾ ನಿರ್ದೇಶನಾಲಯ)**

(ಟಿ.ಎಂ. ವಿಜಯ ಭಾಸ್ಕರ್)
ಮುಖ್ಯ ಕಾರ್ಯದರ್ಶಿ

3. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಪ್ರತಿ ತ್ರೈಮಾಸಕ್ಕೊಮ್ಮೆ ನಡೆಸುವ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸುವ ಬಗ್ಗೆ ಪ್ರಸ್ತಾಪಿಸಿದ ಮುಖ್ಯ ಕಾರ್ಯದರ್ಶಿ ರವರು 2 ಕ್ಕಿಂತ ಕಡಿಮೆ ಸಭೆಗಳನ್ನು ನಡೆಸಿದಂತಹ ಜಿಲ್ಲಾಧಿಕಾರಿಗಳಿಗೆ ಸಭೆ ನಡೆಸುವಂತೆ ಲಿಖಿತ ಸೂಚನೆ ನೀಡಲು ತಿಳಿಸಿದರು.

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

4. ಅಲ್ಪಸಂಖ್ಯಾತರ ಮುಸ್ಲಿಂ ಸಮುದಾಯದವರಿಗೆ ರಾಜ್ಯ ಸರ್ಕಾರದ ಪ್ರವರ್ಗ 1ಎ, ಪ್ರವರ್ಗ 2ಎ ಮತ್ತು ಕೇಂದ್ರ ಸರ್ಕಾರದ ಒಬಿಸಿ ಪ್ರಮಾಣ ಪತ್ರವನ್ನು ಪಡೆಯಲು ಸಾಕಷ್ಟು ತೊಂದರೆಯಾಗುತ್ತಿರುವುದಾಗಿ ಅಧಿಕಾರೇತರ ಸದಸ್ಯರುಗಳು ತಿಳಿಸಿದರು. ಈ ಕುರಿತು ಸುತ್ತೋಲೆಯನ್ನು ಹೊರಡಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆಗೆ ಪತ್ರವನ್ನು ಬರೆಯಲಾಗಿದೆ ಎಂದು ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ತಿಳಿಸಿದರು. ಇದಕ್ಕೆ ಪ್ರತಿ ಸ್ಪಂದಿಸಿದ ಮುಖ್ಯ ಕಾರ್ಯದರ್ಶಿ ರವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆಯಿಂದ ಸುತ್ತೋಲೆಯನ್ನು ಹೊರಡಿಸುವಂತೆ ತಿಳಿಸಿದರು.

**(ಕ್ರಮ: ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ)**

5. ಅಲ್ಪಸಂಖ್ಯಾತ ಕೋಮು ಪ್ರಕರಣ ಮತ್ತು ಇತರೆ ಪ್ರಕರಣಗಳಲ್ಲಿ ವಿಚಾರಣಾಧೀನ ಬಂಧಿಗಳ ಬಗ್ಗೆ ಪ್ರಸ್ತಾಪಿಸಲಾಗಿ, ಅಧಿಕಾರೇತರ ಸದಸ್ಯರು ಸಾಕಷ್ಟು ಬಂಧಿಗಳು ಶಿಕ್ಷಾ ಅವಧಿ ಮೀರಿ ಕಾರಾಗೃಹಗಳಲ್ಲಿ ಆರ್ಥಿಕ ತೊಂದರೆಯಿಂದಾಗಿ ಬಿಡುಗಡೆಯಾಗದೆ ಬಂಧಿತರಾಗಿರುವುದಾಗಿ ತಿಳಿಸಿದರು. ಅಂತಹ ಬಂಧಿಗಳ ವಿವರಗಳನ್ನು ಹೆಸರುಗಳೊಂದಿಗೆ ಜಿಲ್ಲಾವಾರು ಮಾಹಿತಿಯನ್ನು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗಕ್ಕೆ ನೀಡುವಂತೆ ಮತ್ತು ಅಂತಹ ಬಂಧಿತರ ಬಿಡುಗಡೆ ಬಗ್ಗೆ ಕಾನೂನಿನ ಪ್ರಕಾರ ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ತಿಳಿಸಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ಮತ್ತು ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ)**

6. ಕೋಮು ಸಾಮರಸ್ಯವನ್ನು ಪಚೋದಿಸುವ ನಿಟ್ಟಿನಲ್ಲಿ ಎಲ್ಲಾ ಶಾಲೆಗಳಲ್ಲಿ ರಾಷ್ಟ್ರೀಯ ಕೋಮು ಸಾಮರಸ್ಯ ವಾರವನ್ನು ನವೆಂಬರ್ 19 ರಿಂದ ನವೆಂಬರ್ 25 ರವರೆಗೆ ಆಚರಿಸಲು ಪೂರ್ವ ಸಿದ್ಧತೆಗಳನ್ನು ನಡೆಸುವಂತೆ ಮುಖ್ಯ ಕಾರ್ಯದರ್ಶಿ ರವರು ತಿಳಿಸಿದರು.

**(ಕ್ರಮ: ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ/ ಸಿಆಸುಇ)**

7. ಸರ್ಕಾರಿ ಇಲಾಖೆಗಳಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯತೆ ಬಗ್ಗೆ ಮಾಹಿತಿ ಕೇವಲ ಕೆಲವು ಇಲಾಖೆಗಳಿಂದ ಮಾತ್ರ ಸ್ವೀಕೃತವಾಗಿದ್ದು, ಉಳಿದ ಹೆಚ್ಚಿನ ಇಲಾಖೆಗಳಿಂದ ಮಾಹಿತಿಯು ಸಲ್ಲಿಕೆಯಾಗಿರುವುದಿಲ್ಲವೆಂದು ತಿಳಿಸಲಾಯಿತು. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ಎಲ್ಲಾ ಇಲಾಖೆಗಳಿಗೆ ಸಂಪರ್ಕಿಸಿ ಮಾಹಿತಿಯನ್ನು ಪಡೆಯುವಂತೆ ಮುಖ್ಯ ಕಾರ್ಯದರ್ಶಿ ರವರು ತಿಳಿಸಿದರು.

**(ಕ್ರಮ: ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ)**

8. ವಸತಿ ಇಲಾಖೆಯ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ತಿಲಕ್ ನಗರ, ಜೆ.ಜೆ. ನಗರ, ಡಿ.ಜೆ ಹಳ್ಳಿ ಮತ್ತು ಶಿವಾಜಿನಗರದಲ್ಲಿರುವ ಕೊಳಗೇರಿ ಪ್ರದೇಶಗಳಲ್ಲಿ ಸಾಕಷ್ಟು ಅಲ್ಪಸಂಖ್ಯಾತರು ವಾಸವಾಗಿದ್ದು, ಈ ಪ್ರದೇಶಗಳಲ್ಲಿ ವಸತಿ ನಿರ್ಮಾಣವನ್ನು ಕೈಗೊಳ್ಳಲು ಆಗುತ್ತಿರುವ ಅಡಚಣೆಗಳ ಬಗ್ಗೆ ವಿಚಾರಿಸಿದಾಗ, ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಈ ಕುರಿತು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಮತ್ತು ಕಾರ್ಯದರ್ಶಿ, ವಸತಿ ಇಲಾಖೆಯೊಡನೆ ಸಭೆ ನಡೆಸಿ, ಕ್ರಮ ಜರುಗಿಸಲಾಗುವುದೆಂದು ತಿಳಿಸಿದರು ಹಾಗೂ ವಕ್ಫ್ ಮಂಡಳಿಯ ಸಾಕಷ್ಟು ಜಾಗ ಲಭ್ಯವಿದ್ದು, ಈ ಜಾಗಗಳಲ್ಲಿ ಲೀಸ್ ಮುಖಾಂತರ ಮನೆಗಳನ್ನು ನಿರ್ಮಿಸಲು ವಕ್ಫ್ ಮಂಡಳಿಯೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

ವಸತಿ ಇಲಾಖೆಯಲ್ಲಿ ಶೇ.15 ರಷ್ಟು ಅಲ್ಪಸಂಖ್ಯಾತರಿಗೆ ಮೀಸಲಿರಿಸುವ ಬಗ್ಗೆ ಪರಿಶೀಲಿಸಿದಾಗ, ಗ್ರಾಮೀಣ ಪ್ರದೇಶಗಳಲ್ಲಿ ಅಲ್ಪಸಂಖ್ಯಾತರು ವಾಸವಾಗದೇ ಇರುವಂತಹ ಗ್ರಾಮದ ಮೀಸಲಾತಿಯನ್ನು ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಗ್ರಾಮಗಳಿಗೆ ವಿಂಗಡಿಸಲು ಮುಖ್ಯ ಕಾರ್ಯದರ್ಶಿಯವರು ತಿಳಿಸಿದರು. ಶೇ. 15 ರಷ್ಟು ಮೀಸಲಾತಿಯನ್ನು ಗ್ರಾಮದ ಆಧಾರದ ಬದಲಾಗಿ ತಾಲ್ಲೂಕಿನ ಆಧಾರವಾಗಿಟ್ಟುಕೊಂಡು ಶೇ. 15 ರಷ್ಟು ಮೀಸಲಾತಿ ನೀಡುವ ಬಗ್ಗೆ ಪರಿಶೀಲಿಸಲು ಸೂಚಿಸಿದರು.

**(ಕ್ರಮ: ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ)**

9. ಮದರಸಗಳ ಆಧುನೀಕರಣದಲ್ಲಿ ರೂ.40 ಕೋಟಿ ಗುರಿಗೆ ಅನುಗುಣವಾಗಿ ಕೇವಲ ರೂ. 22.34 ಕೋಟಿ ಪ್ರಗತಿಯಾಗಿರುವುದನ್ನು ಗಮನಿಸಿದ ಮುಖ್ಯ ಕಾರ್ಯದರ್ಶಿ ರವರು ಈ ಹಣಕಾಸಿದ ವರ್ಷದಲ್ಲಿ ಪೂರ್ಣ ಪ್ರಮಾಣದಲ್ಲಿ ಹಣವನ್ನು ಉಪಯೋಗಿಸಿಕೊಳ್ಳಲು ಪ್ರಗತಿಯನ್ನು ಚುರುಕುಗೊಳಿಸಲು ತಿಳಿಸಿದರು. ಈ ಹಣಕಾಸಿನ ವರ್ಷದಲ್ಲಿ ಮದರಸಗಳ ಆಧುನೀಕರಣ ಯೋಜನೆಯಲ್ಲಿ ಯಾವುದೇ lapse ಆಗದಂತೆ ನೋಡಿಕೊಳ್ಳಲು ತಿಳಿಸಿದರು. ವಿದ್ಯಾರ್ಥಿವೇತನ ಕುರಿತಂತೆ ಕರ್ನಾಟಕ ಸರ್ಕಾರ ಮತ್ತು ಕೇಂದ್ರ ಸರ್ಕಾರದಡಿ ಪ್ರತ್ಯೇಕವಾಗಿ ಅರ್ಜಿಗಳನ್ನು ಅಹ್ವಾನಿಸುವಂತೆ ಮುಖ್ಯ ಕಾರ್ಯದರ್ಶಿ ರವರು ತಿಳಿಸಿದರು.

**(ಕ್ರಮ: ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ)**

10. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಶೇ. 15 ರಷ್ಟು ಅಲ್ಪಸಂಖ್ಯಾತರಿಗೆ ಮೀಸಲಿರಿಸುವ ಪ್ರಗತಿಯನ್ನು ಸಾಧಿನೆಯಾಗದೇ ಇರುವುದನ್ನು ಗಮನಿಸಿ, ಗುರಿಗೆ ಅನುಗುಣವಾಗಿ ಪ್ರಗತಿ ಸಾಧಿಸುವಂತೆ ತಿಳಿಸಿದರು.

**(ಕ್ರಮ: ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ)**

11. ಬಹುವರ್ಗೀಯ ಅಭಿವೃದ್ಧಿ ಕಾರ್ಯಕ್ರಮದಡಿ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮದಲ್ಲಿ ಸಾಕಷ್ಟು ದುರುಪಯೋಗವಾಗಿದೆ ಎಂದು ಅಧಿಕಾರೇತರ ಸದಸ್ಯರು ತಿಳಿಸಿದರು. ಇದಕ್ಕೆ ಪ್ರತಿಸ್ಪಂದಿಸಿದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಈ ಕುರಿತು ಸಭೆ ನಡೆಸಿ ವರದಿಯನ್ನು ನೀಡುವುದಾಗಿ ತಿಳಿಸಿದರು.

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

( [illegible] ಭಾಸ್ಕರ )

ಮುಖ್ಯ ಕಾರ್ಯದರ್ಶಿ

12. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು, ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮದಡಿ ನೀಡುತ್ತಿರುವ ನೇರ ಸಾಲ ಯೋಜನೆಯಡಿ, ಸಾಲ ವಸೂಲಾತಿಯಲ್ಲಿ ಸಾಕಷ್ಟು ಪ್ರಗತಿಯಾಗದಿದ್ದು, ವಸೂಲಾತಿ ಚುರುಕುಗೊಳಿಸಲು ತಿಳಿಸಿದರು.

**(ಕ್ರಮ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ)**

13. ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಪ್ರಗತಿ ಪರಿಶೀಲನ ಪೂರ್ವಭಾವಿ ಸಭೆಯನ್ನು ನಡೆಸಲು ಮುಖ್ಯ ಕಾರ್ಯದರ್ಶಿ ರವರು ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ತಿಳಿಸಿದರು.

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

**(ಟಿ.ಎಂ. ವಿಜಯ್ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ